ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಆಪ್ತ ಸಹಾಯಕರಿಗೆ ವೇತನ ಪಾವತಿಯಾಗದಿರುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) -

567 (512) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಶಾಸಕರು, ವಿಧಾನ ಪರಿಷತ್ ಸದಸ್ಯರ ಆಪ್ತ ಸಹಾಯಕರಾಗಿ ಜಿಲ್ಲಾಧಿಕಾರಿಗಳ ಕಛೇರಿ ಮೂಲಕ ನೇಮಕಗೊಂಡು, ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಆಗಸ್ಟ್-2020ರ ಮಾಹೆವರೆಗಿನ ವೇತನ ಪಾವತಿ ಆಗಿದೆಯೇ ;

(ಆ) ಆಗದಿದ್ದಲ್ಲಿ, ಎಷ್ಟು ತಿಂಗಳ ವೇತನ ಬಾಕಿಯಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ರೀತಿ ಸಕಾಲದಲ್ಲಿ ವೇತನ ಪಾವತಿಯಾಗದೆ, ಅನಗತ್ಯ ವಿಳಂಬವಾಗಲು ಕಾರಣಗಳೇನು;

(ಈ) ಬಾಕಿ ಇರುವ ಸಂಪೂರ್ಣ ವೇತನವನ್ನು ಯಾವ ಕಾಲಮಿತಿಯೊಳಗೆ ಇವರಿಗೆ ಪಾವತಿಸಲಾಗುವುದು?